# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **479** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸುವ ಸಚಿವರು** | **ಉನ್ನತ ಶಿಕ್ಷಣ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | **20.02.2023** |

| ಪ್ರಶ್ನೆ | | ಉತ್ತರ |
|---|---|---|
| (ಅ) | ವಿಶ್ವವಿದ್ಯಾನಿಲಯಗಳ ಅತಿಥಿ/ಗುತ್ತಿಗೆ ಉಪನ್ಯಾಸಕರಿಗೆ ಯು.ಜಿ.ಸಿ. ನಿಗದಿಪಡಿಸಿರುವ ಮಾಸಿಕ ವೇತನವೆಷ್ಟು; (ಪೂರ್ಣ ವಿವರ ನೀಡುವುದು) | ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರಿಗೆ ಯುಜಿಸಿಯ ಪತ್ರ ಸಂ. F.25-1/2018(PS/MISC) dated:28.01.2019 ರ ಪತ್ರದಲ್ಲಿ ಅತಿಥಿ ಉಪನ್ಯಾಸಕರ ಗೌರವಧನದ ದರಗಳಿಗೆ ಸಂಬಂಧಿಸಿದಂತೆ ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ (Revised guidelines for enhancement of the Rates of Honorarium of Guest Faculty). ಸದರಿ ಮಾರ್ಗಸೂಚಿಗಳನ್ವಯ ಅತಿಥಿ ಉಪನ್ಯಾಸಕರ ಗೌರವಧನವನ್ನು ಕಾರ್ಯಭಾರಕ್ಕನುಗುಣವಾಗಿ ಪ್ರತಿ ಉಪನ್ಯಾಸಕ್ಕೆ ರೂ.1,500/- ನ್ನು ನಿಗದಿಪಡಿಸಿ, ರೂ. 50,000/- ಗಳು ಮೀರದಂತೆ ಮಾಸಿಕ ಗೌರವಧನವನ್ನು ನಿಗದಿಪಡಿಸಿರುತ್ತದೆ. |
| (ಆ) | ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರಿಗೆ ಇತ್ತೀಚೆಗೆ ಜಾರಿಗೊಳಿಸಿದ ಪರಿಷ್ಕೃತ ವೇತನವನ್ನು ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೈಸೂರು ವಿಶ್ವವಿದ್ಯಾಲಯದ ವಿವಿಧ ವಿಭಾಗ/ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಭಾವನೆಯನ್ನು ದಿನಾಂಕ:22.08.2022 ರಂದು ಜರುಗಿದ ಸಿಂಡಿಕೇಟ್ ಸಭೆಯಲ್ಲಿ ಪರಿಷ್ಕರಿಸಲು ತೀರ್ಮಾನಿಸಿ ದಿನಾಂಕ:22.09.2022ರಂದು ಪರಿಷ್ಕರಿಸಿ ಆದೇಶ ಹೊರಡಿಸಿ, ಈ ಬಗ್ಗೆ ಆರ್ಥಿಕ ಇಲಾಖೆಯ ಘಟನೋತ್ತರ ಮಂಜೂರಾತಿಯನ್ನು ಮೈಸೂರು ವಿಶ್ವವಿದ್ಯಾಲಯವು ಕೋರಿರುತ್ತದೆ.<br><br>ಆದರೆ, ಆರ್ಥಿಕ ಇಲಾಖೆಯು ಮೈಸೂರು ವಿಶ್ವವಿದ್ಯಾಲಯದ ವಿವಿಧ ವಿಭಾಗಗಳು/ಸ್ನಾತಕೋತ್ತರ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಮತ್ತು ಇತರ ತಾತ್ಕಾಲಿಕ ಬೋಧಕೇತರ ಸಿಬ್ಬಂದಿಯ ವೇತನ ಪರಿಷ್ಕರಣೆ ಪ್ರಸ್ತಾವನೆನ್ನು ಒಪ್ಪುವುದಿಲ್ಲವೆಂದು ತಿಳಿಸುತ್ತಾ, ಮೈಸೂರು ವಿಶ್ವವಿದ್ಯಾಲಯವು ಬೋಧಕ/ಬೋಧಕೇತರ ವೃಂದಗಳಲ್ಲಿ ಮಂಜೂರಾಗಿರುವ ಹುದ್ದೆಗಳಿಗೂ ಮೀರಿ ಅಧಿಕ ಸಂಖ್ಯೆಯಲ್ಲಿ ತಾತ್ಕಾಲಿಕ ಸಿಬ್ಬಂದಿಗಳನ್ನು ನೇಮಿಸಿಕೊಂಡಿದ್ದು, ಅವುಗಳನ್ನು ಸಹ ಮರು ಪರಿಶೀಲಿಸುವಂತೆ ತನ್ನ ಅ.ಟಿ. ಪತ್ರ ಸಂಖ್ಯೆ: ಆಇ 25 ವೆಚ್ಚ-8/2023, ದಿನಾಂಕ: 11.01.2023 ರಲ್ಲಿ ಉನ್ನತ ಶಿಕ್ಷಣ ಇಲಾಖೆಗೆ ಸೂಚಿಸಿರುತ್ತದೆ.<br><br>ಮುಂದುವರೆದು, ಮೈಸೂರು ವಿಶ್ವವಿದ್ಯಾಲಯದ ಹಲವು ತಾತ್ಕಾಲಿಕ ನೌಕರರುಗಳು, ಈ ಹಿಂದಿನ ಕುಲಪತಿಗಳು ತಮ್ಮ ನಿವೃತ್ತಿ ದಿನದಂದು ತಮಗೆ ಇಷ್ಟ ಬಂದ ತಾತ್ಕಾಲಿಕ ನೌಕರರುಗಳಿಗೆ ಆಯಾ ಹುದ್ದೆಗೆ ವಿದ್ಯಾರ್ಹತೆ ಇಲ್ಲದಿದ್ದರೂ ಹುದ್ದೆ ಬದಲಾವಣೆ ಮಾಡಿ ವೇತನ ಪರಿಷ್ಕರಣೆ ಮಾಡಿರುತ್ತಾರೆಂದು ಉನ್ನತ ಶಿಕ್ಷಣ ಇಲಾಖೆಗೆ ದೂರು ನೀಡಿರುತ್ತಾರೆ.<br><br>ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಕಾಯ್ದೆ 2000 ರ ಪ್ರಕರಣ 56 ರಡಿ ತಾತ್ಕಾಲಿಕ ನೇಮಕಾತಿಗಳನ್ನು ಮಂಜೂರಾದ ಹುದ್ದೆಗಳಿಗೆ ಎದುರಾಗಿ ಮಾತ್ರ ಮತ್ತು ಪರಿನಿಯಮಗಳ ಮೂಲಕ ನಿಯಮಿಸಲಾದ ವಿಧಾನದಲ್ಲಿ ಮಾಡಬೇಕಾಗಿರುತ್ತದೆ. |
| (ಇ) | ಈ ರೀತಿ ತಡೆಹಿಡಿಯಲು ಕಾರಣಗಳೇನು; (ವಿವರ ನೀಡುವುದು) | |
| (ಈ) | ಇತ್ತೀಚೆಗೆ ಅತಿಥಿ ಉಪನ್ಯಾಸಕರ ವೇತನ ಪರಿಷ್ಕರಣೆ ಮಾಡುವಲ್ಲಿ ವಿಶ್ವವಿದ್ಯಾಲಯ ಅನುಸರಿಸಿರುವ ಮಾನದಂಡಗಳೇನು; (ವಿವರಗಳೊಂದಿಗೆ ಮಾಹಿತಿ ನೀಡುವುದು) | |

<table>
<tr>
<td></td>
<td></td>
<td>ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಕಾಯ್ದೆ 2000 ರ ಪ್ರಕರಣ 29 (3) ರಲ್ಲಿ ನೌಕರರ ವೇತನ ಶ್ರೇಣಿಗಳನ್ನು ಪರಿಷ್ಕರಿಸುವ ಅಥವಾ ಅವರಿಗೆ ಯಾವುದೇ ಭತ್ಯೆಗಳನ್ನು ಅಥವಾ ಉಪಲಬ್ಧಿಗಳನ್ನು ನೀಡುವ ಅಧಿಕಾರವನ್ನು ಸಿಂಡಿಕೇಟಿಗೆ ಪ್ರಧಾನ ಮಾಡಿರುವುದಾಗಿ ಭಾವಿಸತಕ್ಕದ್ದಲ್ಲ. ಈ ನಿಯಮದನ್ವಯ ವಿಶ್ವವಿದ್ಯಾಲಯವು ತಾತ್ಕಾಲಿಕ ನೌಕರರುಗಳಿಗೆ ವೇತನ ಪರಿಷ್ಕರಣೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಪೂರ್ವಾನುಮೋದನೆ ಪಡೆದಿರುವುದಿಲ್ಲ.<br><br>ಮೇಲ್ಕಂಡ ಎಲ್ಲಾ ಕಾರಣಗಳಿಂದ ಉನ್ನತ ಶಿಕ್ಷಣ ಇಲಾಖೆಯು ಮೈಸೂರು ವಿಶ್ವವಿದ್ಯಾಲಯವು ದಿನಾಂಕ:09.12.2022ರಂದು ನಡೆಸಿದ ಹಣಕಾಸು ಸಮಿತಿ ಸಭೆಯಲ್ಲಿ ಮೈಸೂರು ವಿಶ್ವವಿದ್ಯಾಲಯದ ವಿವಿಧ ವಿಭಾಗಗಳು/ಸ್ನಾತಕೋತ್ತರ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ಮತ್ತು ಇತರ ತಾತ್ಕಾಲಿಕ ಬೋಧಕೇತರ ಸಿಬ್ಬಂದಿಯ ವೇತನ ಪರಿಷ್ಕರಿಸಿರುವ ಕುರಿತು ಆರ್ಥಿಕ ಇಲಾಖೆಯ ಅ.ಟಿ. ಪತ್ರ ಸಂ. ಆಇ 25 ವೆಚ್ಚ-8/2023, ದಿನಾಂಕ:11.01.2023 ರಲ್ಲಿ ತಿಳಿಸಿರುವ ಅಂಶಗಳನ್ನೊಳಗೊಂಡಂತೆ ನಿಗದಿತ ಕಾರ್ಯಸೂಚಿಯನ್ವಯ ಕ್ರಮವಹಿಸಿ, ಪೂರ್ವಭಾವಿ ಪರಿಶೀಲನೆಗಾಗಿ, ಪ್ರೊ|| ಟಿ.ಡಿ. ಕೆಂಪರಾಜು, ವಿಶ್ರಾಂತ ಕುಲಪತಿಗಳು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಅವರ ಅಧ್ಯಕ್ಷತೆಯಲ್ಲಿ ಒಂದು ಏಕ ಸದಸ್ಯ ಪರಿಶೀಲನಾ ಸಮಿತಿಯನ್ನು ರಚಿಸಲು ಕ್ರಮವಹಿಸಲಾಗುತ್ತಿದೆ.</td>
</tr>
<tr>
<td>(ಉ)</td>
<td>ಇತ್ತೀಚೆಗೆ ಅತಿಥಿ ಉಪನ್ಯಾಸಕರಿಗೆ ಪರಿಷ್ಕರಣೆಗೊಳಿಸಿದ ತಲಾ ಮಾಸಿಕ ವೇತನವೆಷ್ಟು;</td>
<td>ಮೈಸೂರು ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಪರಿಷ್ಕರಣೆಗೊಳಿಸಿದ ತಲಾ ಮಾಸಿಕ ವೇತನದ ವಿವರ ಈ ಕೆಳಕಂಡಂತಿದೆ;<br>(ರೂ.ಗಳಲ್ಲಿ)
<table>
<tr><th>ಕ್ರ.ಸಂ.</th><th>ವಾರಕ್ಕೆ ನಿಗದಿಪಡಿಸಿರುವ ಕಾರ್ಯಭಾರ (ಗಂಟೆಗಳಲ್ಲಿ)</th><th>NET/SLET/Ph.D ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿದ್ದ ಸಂಭಾವನೆ</th><th>NET/SLET/Ph.D ವಿದ್ಯಾರ್ಹತೆ ಹೊಂದಿರದ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿದ್ದ ಸಂಭಾವನೆ</th></tr>
<tr><td>1.</td><td>04 ಗಂಟೆ</td><td>12,000/-</td><td>8,800/-</td></tr>
<tr><td>2</td><td>08 ಗಂಟೆ</td><td>24,000/-</td><td>17,600/-</td></tr>
<tr><td>3</td><td>12 ಗಂಟೆ</td><td>37,000/-</td><td>26,400/-</td></tr>
</table></td>
</tr>
<tr>
<td>(ಊ)</td>
<td>ಸದರಿ ಅತಿಥಿ ಉಪನ್ಯಾಸಕರಿಗೆ ಬಾಕಿ ಇರುವ ಪರಿಷ್ಕೃತ ವೇತನವನ್ನು ಯಾವ ಕಾಲಮಿತಿಯಲ್ಲಿ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು?</td>
<td>ಮೈಸೂರು ವಿಶ್ವವಿದ್ಯಾನಿಲಯದಲ್ಲಿ ದಿನಾಂಕ: 03.02.2023ರಂದು ಜರುಗಿದ ಸಿಂಡಿಕೇಟ್ ಸಭೆಯು, ಅತಿಥಿ ಉಪನ್ಯಾಸಕರ ವೇತನಕ್ಕೆ ಸಂಬಂಧಿಸಿದಂತೆ ಹಣಕಾಸು ಸಮಿತಿಯ ಸಭೆಯಲ್ಲಿ ಸರ್ಕಾರದ ಪ್ರತಿನಿಧಿಗಳು ವೇತನ ಹೆಚ್ಚಳದ ಪ್ರಸ್ತಾವನೆಯನ್ನು ಒಪ್ಪದೆ ಇರುವುದರಿಂದ, ಮುಂಬರುವ ಸಾಲಿನಲ್ಲಿ ಯುಜಿಸಿ ಮಾರ್ಗಸೂಚಿಗಳು ಹಾಗೂ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ವಿಶ್ವವಿದ್ಯಾಲಯದ ಸಕ್ಷಮ ಪ್ರಾಧಿಕಾರದ ಶಿಫಾರಸ್ಸಿನೊಂದಿಗೆ ಸರ್ಕಾರದ ಅನುಮೋದನೆ ಪಡೆದು ಅಗತ್ಯ ಕ್ರಮವಹಿಸಬೇಕಾಗಿರುತ್ತದೆ.</td>
</tr>
</table>

ಸಂಖ್ಯೆ: ಇಡಿ 16 ಯುಎಂವಿ 2023

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು